**INDIAN INSTITUTE OF TECHNOLOGY KHARAGPUR**
**ACADEMIC SECTION**

No. IIT/Acad/PGS&R/Govt. of Karnataka
Date: August 03, 2017

Contents of the letter No. BCWD/DBT-2/CR-3/2017-18 dated 13.07.2017 from Mr. V. Anbu Kumar, IAS Commissioner, Backward Classes Welfare Department, Bangalore, Government of Karnataka regarding sanction of one time incentive to students studying in IIM / IIT and Indian Institute of Science, which is self explanatory, is annexed herewith for information and necessary action of all concerned.

Deputy Registrar (Academic)

**To**
All Head of the Departments/Centres/Schools – With a request to inform/circulate among the students

**Copy to:**

1. Office file
2. Notice Board and E-Notice Board

AR(PG)
3/8

GOVERNMENT OF KARNATAKA

No. BCWD/DBT-2/CR-3/2017-18

Office of the Commissioner,
Backward Classes Welfare Dept.,
No.16-D, D. Devaraj Urs Bhavan,
3rd Floor, Millers Tank Bund Area,
Vasantha Nagara, Bangalore-52,
Date: 13.07.2017

To,
Prof. Partha Pratim Chakraborty
Director,
Indian institute of Technology
Kharagpur-721301

Sir,

subject : Regarding sanction of one time incentive to students studying in IIM / IIT and Indian institute of Science.

Reference: Government order number BCW 427 BMS 2017, Bangalore, dated: 22.05.2017.

***

With reference to the above subject I am pleased to inform you that Government of Karnataka is sanctioning an one time incentive to students from Karnataka belonging to OBC and general category (excluding SC, ST and Minorities) who get admission in IIM, IIT and Indian institute of Science. The Scheme is introduced in the financial year 2017-18. A Government order (ref) has also been issued in this regard. Hence I request you to kindly inform the OBC and general category students (excluding SC, ST and Minorities students) of your institute to avail this benefit.

All necessary information regarding this scheme is provided in website: www.backwardclasses.kar.nic.in A separate helpline is also been provided for the benefit of students (helpline number - 080 65970004). Students can also contact Sri Pradeep B.S, Joint Director, Backward Classes Welfare Department, Government of Karnataka in this regard on his mobile number-9480088828.

A copy of the Government order is enclosed along with this letter for kind perusal and necessary action in this regard.

Thanking you.

DRAC
NAPL
2.8.17

With warm regards,

V. Anbu kumar, IAS
Commissioner,
Backward Classes Welfare Department,
Bangalore

Dean UGS
Dean PGS&R
Dean SA
DR (Academic)
Registrar
1/8/17

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- IIM, IIT, IISc ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಹಿಂದುಳಿದ ವರ್ಗಗಳ ಸಮುದಾಯದ ವಿದ್ಯಾರ್ಥಿಗಳಿಗೆ ರೂ.2.00 ಲಕ್ಷಗಳ ಪ್ರೋತ್ಸಾಹಧನ ನೀಡಲು ಸರ್ಕಾರದ ಆದೇಶವನ್ನು ಮಾರ್ಗಸೂಚಿಗಳೊಂದಿಗೆ ಹೊರಡಿಸಲು ಕೋರುವ ಕುರಿತು.

ಓದಲಾಗಿದೆ:-

1. 2017-18ನೇ ಸಾಲಿನ ಆಯವ್ಯಯ ಕಂಡಿಕೆ ಸಂಖ್ಯೆ:195.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪತ್ರ ಸಂಖ್ಯೆ:ಹಿಂವಕಇ/ಡಿ.ಬಿ.ಟಿ-2/ಸಿಆರ್-03/2017-18, ದಿನಾಂಕ: 04/04/2017.
3. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 191 ವೆಚ್ಚ-3/2017, ದಿನಾಂಕ:01.04.2017.

******

ಪ್ರಸ್ತಾವನೆ:-

ಮೇಲೆ ಓದಲಾದ (1)ರಲ್ಲಿ 2017-18ನೇ ಸಾಲಿನಲ್ಲಿ ಸನ್ಮಾನ್ಯ ಮುಖ್ಯಮಂತ್ರಿಯವರು ಮಂಡಿಸಿದ ಆಯವ್ಯಯ ಭಾಷಣದ ಕಂಡಿಕೆ:(195)ರಲ್ಲಿ "IIM, IIT, IISc ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಹಿಂದುಳಿದ ವರ್ಗಗಳ ಸಮುದಾಯದ ವಿದ್ಯಾರ್ಥಿಗಳಿಗೆ ಒಂದು ಬಾರಿ ತಲಾ ರೂ.2 ಲಕ್ಷಗಳ ಪ್ರೋತ್ಸಾಹಧನ ಒದಗಿಸಲಾಗುವುದು" ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ(2)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು ಗ್ರಾಮೀಣ ಹಾಗೂ ಬಡಕುಟುಂಬದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಾದ IIM, IIT, IISc ಗಳಲ್ಲಿ ಪ್ರವೇಶ ಪಡೆಯಲು ಪ್ರೋತ್ಸಾಹ ನೀಡುವುದು ಅವಶ್ಯಕವಾಗಿದ್ದು, ಪ್ರವೇಶ ಪಡೆಯುವ ಪ್ರತಿಭಾವಂತ ಹಿಂದುಳಿದ ವರ್ಗಗಳ ಸಮುದಾಯದ ವಿದ್ಯಾರ್ಥಿಗಳಿಗೆ ತಮ್ಮ ಶಿಕ್ಷಣವನ್ನು ಮುಂದುವರೆಸಲು ಹಾಗೂ ಉತ್ತೇಜನ ನೀಡಲು ಒಂದು ಬಾರಿಗೆ ತಲಾ ರೂ.2.00 ಲಕ್ಷಗಳ ಪ್ರೋತ್ಸಾಹಧನವನ್ನು ನೀಡಲು ಲೆಕ್ಕಶೀರ್ಷಿಕೆ:2225-03-277-2-37 ರಡಿ ರೂ.10.00 ಕೋಟಿ ಒದಗಿಸಲಾಗಿದೆ. ಎಂದು ತಿಳಿಸುತ್ತಾ ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಸರ್ಕಾರದ ಅನುಮೋದನೆ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರಲ್ಲಿ ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-3 ಮತ್ತು ವೆಚ್ಚ- 9ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದಂತೆ 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ:195ಗೆ ಅನುದಾನದ ಲೆಕ್ಕಶೀರ್ಷಿಕೆ:2225-03-277-2-37ರಡಿ ಒದಗಿಸಿರುವ ಅನುದಾನದಿಂದ ಭರಿಸಲು ತಿಳಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯು 427 ಬಿಎಂಎಸ್ 2017, ಬೆಂಗಳೂರು

ದಿನಾಂಕ: 22-05-2017

ಪ್ರಸ್ತಾವನೆಯಲ್ಲಿ ವಿವರಿಸಿದ ಹಿನ್ನಲೆಯಲ್ಲಿ 2017-18ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ:195ನ್ನು ಅನುಷ್ಠಾನಗೊಳಿಸಲು ಲೆಕ್ಕ ಶೀರ್ಷಿಕೆ 2225-03-277-2-37ರಲ್ಲಿ ಒದಗಿಸಿರುವ ಅನುದಾನದ ಮಿತಿಯಲ್ಲಿ IIM, IIT, IISc ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಹಿಂದುಳಿದ ವರ್ಗಗಳ ಸಮುದಾಯದ ವಿದ್ಯಾರ್ಥಿಗಳಿಗೆ ಒಂದು ಬಾರಿ ತಲಾ ರೂ.2 ಲಕ್ಷಗಳ ಪ್ರೋತ್ಸಾಹಧನ ಒದಗಿಸಲು ಹಾಗೂ ಈ ಆದೇಶಕ್ಕೆ ಲಗತ್ತಿಸಿರುವ ಸದರಿ ಯೋಜನೆಯ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸಲು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

...2

ಈ ಯೋಜನೆಯನ್ನು ಮಾರ್ಗಸೂಚಿ, ನಿಯಮಾನುಸಾರ ಮತ್ತು ಪಾರದರ್ಶಕತೆಯನ್ವಯ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 277 ವೆಚ್ಚ-3 2017, ದಿನಾಂಕ: 06/05/2017ರ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 88 ಐಎಂಎಂ 2017, ದಿನಾಂಕ:06.05.2017ರನ್ವಯ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಎಸ್.ಆರ್. ಎರೆಕುಪ್ಪಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2), ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
5. ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
7. ಎಲ್ಲಾ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸ ಸೌಧ.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 427 ಬಿಎಂಎಸ್ 2017, ಬೆಂಗಳೂರು

ದಿನಾಂಕ: 22.05.2017 ಕ್ಕೆ

ಅನುಬಂಧ

**IIM, IIT, IISc ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಹಿಂದುಳಿದ ವರ್ಗಗಳ ಸಮುದಾಯದ ವಿದ್ಯಾರ್ಥಿಗಳಿಗೆ ರೂ 2 ಲಕ್ಷಗಳ ಪ್ರೋತ್ಸಾಹಧನ ಕಾರ್ಯಕ್ರಮದ ಅನುಷ್ಠಾನದ ಮಾರ್ಗಸೂಚಿಗಳು**

(ಸಮಾಜ ಕಲ್ಯಾಣ/ಪರಿಶಿಷ್ಠ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವ್ಯಾಪ್ತಿಗೆ ಬರುವ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ.

IIM, IIT, IISc ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಹಿಂದುಳಿದ ವರ್ಗಗಳ ಸಮುದಾಯದ ವಿದ್ಯಾರ್ಥಿಗಳಿಗೆ ಒಂದು ಬಾರಿ ತಲಾ ರೂ 2 ಲಕ್ಷಗಳ ಪ್ರೋತ್ಸಾಹಧನ ಒದಗಿಸಲಾಗುವುದು.

1. **ಯೋಜನೆಯ ಉದ್ದೇಶ :-**

ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಾದ IIM, IIT, IISc ಇತ್ಯಾದಿ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪ್ರತಿಭಾವಂತ ಹಿಂದುಳಿದ ವರ್ಗಗಳ ಸಮುದಾಯದ ವಿದ್ಯಾರ್ಥಿಗಳಿಗೆ ಅವರ ವಿದ್ಯಾಭ್ಯಾಸವನ್ನು ಮುಂದುವರೆಸಲು ಹಾಗೂ ಉನ್ನತ ಶಿಕ್ಷಣ / ಸಂಶೋಧನೆಯಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ತೊಡಗಿಕೊಳ್ಳುವಂತೆ ಪ್ರೋತ್ಸಾಹಿಸಲು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಒಂದು ಬಾರಿಗೆ ರೂ. 2.00 ಲಕ್ಷಗಳ ಪ್ರೋತ್ಸಾಹಧನ ಮಂಜೂರು ಮಾಡುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ.

2. **ಅರ್ಹತೆ:-**

1. ವಿದ್ಯಾರ್ಥಿಯು ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು.
2. ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿ ಗೆ ಸೇರಿದವರಾಗಿರಬೇಕು. ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ 6 ಲಕ್ಷಗಳಿಗೆ ಮೀರಿರಬಾರದು. ಆರ್ಥಿಕವಾಗಿ ಹಿಂದುಳಿದ, ವಾರ್ಷಿಕವಾಗಿ ರೂ 6 ಲಕ್ಷಗಳಿಗಿಂತ ಕಡಿಮೆ ಆದಾಯ ಹೊಂದಿರುವ ಸಾಮಾನ್ಯ ಅಭ್ಯರ್ಥಿಗಳು ಸಹ ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.
3. ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಾದ IIM, IIT, IISc ಇತ್ಯಾದಿ ಸಂಸ್ಥೆಗಳು ನಡೆಸುವ JEE-Advanced, CAT, JAM, Online Entrance Test ಇತ್ಯಾದಿ ಪ್ರವೇಶ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು.
4. ಈ ಮೇಲ್ಕಂಡ ಸಂಸ್ಥೆಗಳಲ್ಲಿ ಡಿಪ್ಲೊಮೋ, ಪಿಜಿ ಡಿಪ್ಲೊಮೋ ಹಾಗೂ ಇತರ ಸರ್ಟಿಫಿಕೇಟ್ ಕೋರ್ಸುಗಳಿಗೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಧನ ಸಹಾಯ ಪಡೆಯಲು ಅರ್ಹತೆ ಹೊಂದಿರುವುದಿಲ್ಲ.
5. IIT, IIM, IISc ಸಂಸ್ಥೆಗಳಲ್ಲಿ ಪ್ರವೇಶ ಪಡೆದು ಯಾವುದೇ ವರ್ಷದ ಕೋರ್ಸ್ ಗಳಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಈ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

6. IIT, IIM, IISc ಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳು ಅವರ ಶೈಕ್ಷಣಿಕ ಅವಧಿಯಲ್ಲಿ ಒಂದು ಬಾರಿ ಮಾತ್ರ ಈ ಸೌಲಭ್ಯವನ್ನು ಪಡೆಯಲು ಅರ್ಹರಿರುತ್ತಾರೆ.
7. ಈ ಕಾರ್ಯಕ್ರಮವು ವಿದ್ಯಾರ್ಥಿಗಳಿಗೆ ಅವರ ಶಿಕ್ಷಣವನ್ನು ಮುಂದುವರೆಸಲು ಪ್ರೋತ್ಸಾಹ ನೀಡುವ ಕಾರ್ಯಕ್ರಮವಾಗಿದ್ದು, ಈ ಸೌಲಭ್ಯವನ್ನು ಪಡೆಯುವ ವಿದ್ಯಾರ್ಥಿಗಳು ಶುಲ್ಕವಿನಾಯಿತಿ ಯೋಜನೆಯಡಿಯು ಸಹ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.

3. <u>ಅನುದಾನ ಹಂಚಿಕೆ ವಿಧಾನ :-</u>

ಆಯಾ ಆರ್ಥಿಕ ವರ್ಷದಲ್ಲಿ ಲಭ್ಯವಾಗುವ ಅನುದಾನವನ್ನು ಈ ಕೆಳಕಂಡಂತೆ ಕೋರ್ಸ್ ವಾರು ಹಂಚಿಕೆ ಮಾಡುವುದು.

| ಕ್ರ.ಸಂ | ಕೋರ್ಸ್ | ಅನುದಾನ ಹಂಚಿಕೆ |
|---|---|---|
| 1 | IIT | 45% |
| 2 | IIM | 35% |
| 3 | IISc | 20% |

ಕೋರ್ಸ್ ವಾರು ಲಭ್ಯವಾಗುವ ಅನುದಾನವನ್ನು ಈ ಕೆಳಗಿನ ಮೀಸಲಾತಿಯಂತೆ ಪ್ರವರ್ಗವಾರು ಮರು ಹಂಚಿಕೆ ಮಾಡುವುದು.

| ಕ್ರ.ಸಂ | ಪ್ರವರ್ಗ | ಶೇಕಡಾವಾರು ಮೀಸಲಾತಿ |
|---|---|---|
| 1 | ಪ್ರವರ್ಗ-1 | 21% |
| 2 | 2ಎ | 45% |
| 3 | 3ಎ | 14% |
| 4 | 3ಬಿ | 15% |
| 5 | ಇತರೆ | 5% |
| ಒಟ್ಟು | | 100% |

4. <u>ಅರ್ಜಿ ಸಲ್ಲಿಸುವ ವಿಧಾನ</u>

1. ಈ ಯೋಜನೆಗೆ ಅರ್ಹ ವಿದ್ಯಾರ್ಥಿಗಳಿಂದ ಆನ್ ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸುವುದು.
2. ವಿದ್ಯಾರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ನೀಡಿರುವ ಸೂಚನೆಗಳನ್ನು ಕಡ್ಡಾಯವಾಗಿ ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳ ಅನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು. ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
3. ಅರ್ಹ ವಿದ್ಯಾರ್ಥಿಗಳು, ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಇತ್ತೀಚಿನ ಭಾವಚಿತ್ರ, ಆಧಾರ್ ಸಂಖ್ಯೆ, ಬ್ಯಾಂಕ್ ಖಾತೆ ಸಂಖ್ಯೆ ಮತ್ತು ಐ.ಎಫ್.ಎಸ್.ಸಿ. ಕೋಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಕೋರ್ಸ್ ಪ್ರವೇಶಕ್ಕೆ ನಿಗದಿ ಪಡಿಸಿದ ಪ್ರವೇಶ ಪರೀಕ್ಷೆಯ ಅಂಕಪಟ್ಟಿ, ಕೋರ್ಸ್ ಗಳಿಗೆ ಪ್ರವೇಶ ಪಡೆದ ಬಗ್ಗೆ ದಾಖಲಾತಿ, ಈ ನಿಗಧಿತ ದಾಖಲೆಗಳನ್ನು ಆನ್ ಲೈನ್ ನಲ್ಲಿ UPLOAD ಮಾಡಿ ಅರ್ಜಿ ಸಲ್ಲಿಸುವುದು ಹಾಗೂ ಹಾರ್ಡ್ ಕಾಪಿಯನ್ನು ಸಂಬಂಧಿಸಿದ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ನಿಗಧಿತ ಸಮಯದೊಳಗೆ ಸಲ್ಲಿಸುವುದು.

...5

4. ದಾಖಲಾತಿ ಪರಿಶೀಲನಾ ಸಮಯದಲ್ಲಿ ನಿಗಧಿತ ದಾಖಲೆಗಳ ಮೂಲ ಪ್ರತಿಗಳನ್ನು ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ನಿಗಧಿತ ಸಮಯದೊಳಗೆ ಸಲ್ಲಿಸುವುದು.

5. ಆಯ್ಕೆ ವಿಧಾನ

1. ವಿದ್ಯಾರ್ಥಿಯ ಆಯ್ಕೆಯನ್ನು ಅನುದಾನದ ಲಭ್ಯತೆ, ಮೀಸಲಾತಿ, ವಿದ್ಯಾರ್ಥಿಯು JEE-Advanced, CAT, JAM, Online entrance test ಇತ್ಯಾದಿ ಪ್ರವೇಶ ಪರೀಕ್ಷೆಗಳಲ್ಲಿ ಗಳಿಸಿದ ರ್‍ಯಾಂಕಿಂಗ್ ಆಧಾರದಲ್ಲಿ ಆಯ್ಕೆಮಾಡುವುದು.
2. ಒಂದು ವೇಳೆ ಒಂದು ಪ್ರವರ್ಗದಲ್ಲಿ ವಿದ್ಯಾರ್ಥಿಗಳು ಲಭ್ಯವಿಲ್ಲದೇ ಇದ್ದಲ್ಲಿ ಅಂತಹ ಸ್ಥಾನಗಳನ್ನು ಇತರೆ ಪ್ರವರ್ಗದ ವಿದ್ಯಾರ್ಥಿಗಳಿಂದ ಆವರ್ತನ ಆಧಾರದ ಮೇಲೆ ತುಂಬುವುದು.
3. ಈ ಯೋಜನೆಯಡಿ ಸೌಲಭ್ಯ ಪಡೆದ ವಿದ್ಯಾರ್ಥಿಗಳಿಗೆ, ಪ್ರೋತ್ಸಾಹಧನವನ್ನು ಆಯ್ಕೆಯಾದ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ NEFT/RTGS/PFMS ಮೂಲಕ ನೇರವಾಗಿ ಜಮಾ ಮಾಡುವುದು.
4. ಈ ಯೋಜನೆಯಡಿ ಸೌಲಭ್ಯವನ್ನು ಆಯಾ ಆರ್ಥಿಕ ವರ್ಷದಲ್ಲಿ ಲಭ್ಯವಿರುವ ಅನುದಾನದ ಮಿತಿಗೊಳಪಟ್ಟು ಮಂಜೂರು ಮಾಡತಕ್ಕದ್ದು. ಈ ಯೋಜನೆಗೆ ತಗಲುವ ವೆಚ್ಚವನ್ನು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಯೋಜನೆ ರಾಜ್ಯ ವಲಯ ಲೆಕ್ಕಶೀರ್ಷಿಕೆ 2225-03-277-2-37 (059)ರಡಿ ಒದಗಿಸಿರುವ ಅನುದಾನದಲ್ಲಿ ವೆಚ್ಚ ಭರಿಸತಕ್ಕದ್ದು.

(ಎನ್.ಆರ್.ಎರೆಕುಪ್ಪಿ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.